ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ. ಮಲ್ಲೇಶ್ವರಂ. ಬೆಂಗಳೂರು

***************************************************************************************

ಸಂ. ಗಣಕಶಾಖೆ/ಎಸ್.ಎಸ್.ಎಲ್.ಸಿ/ತಾ.ಪ್ರ.ಪ.ತಿ/02/2019-20 ದಿನಾಂಕ: 10/01/2020

- ಸುತ್ತೋಲೆ -

ವಿಷಯ : ಏಪ್ರಿಲ್-2020 ರ ಎಸ್.ಎಸ್.ಎಲ್.ಸಿ ಪರೀಕ್ಷೆಯ ವಿದ್ಯಾರ್ಥಿಗಳ ತಾತ್ಕಾಲಿಕ ಪ್ರವೇಶ ಪತ್ರಗಳ ಡೌನ್‌ಲೋಡ್ ಮತ್ತು ತಿದ್ದುಪಡಿಗಳನ್ನು ಆನ್‌ಲೈನ್‌ನಲ್ಲಿ ಅಪ್‌ಡೇಟ್ ಮಾಡುವ ದಿನಾಂಕವನ್ನು ವಿಸ್ತರಿಸುತ್ತಿರುವ ಬಗ್ಗೆ.

ಉಲ್ಲೇಖ : ಮಂಡಳಿಯ ಸುತ್ತೋಲೆ ಪತ್ರ ಸಂಖ್ಯೆಗಣಕಶಾಖೆ/ಎಸ್.ಎಸ್.ಎಲ್.ಸಿ/ತಾ.ಪ್ರ.ಪ.ತಿ/01/2019-20 ದಿನಾಂಕ: 30/12/2019

*****

ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳ ಮುಖ್ಯಸ್ಥರು ತಮ್ಮ ಶಾಲೆಯ (ಶಾಲಾ ಅಭ್ಯರ್ಥಿ, ಖಾಸಗಿ ಅಭ್ಯರ್ಥಿ, ಪುನರಾವರ್ತಿತ ಅಭ್ಯರ್ಥಿಗಳ) ಏಪ್ರಿಲ್-2020ರ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ತೆಗೆದುಕೊಳ್ಳುವ ವಿದ್ಯಾರ್ಥಿಗಳ ತಾತ್ಕಾಲಿಕ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳಲು ಮತ್ತು ವಿದ್ಯಾರ್ಥಿಗಳ ವಿವರಗಳಲ್ಲಿ ತಿದ್ದುಪಡಿಗಳಿದ್ದಲ್ಲಿ ಆನ್‌ಲೈನ್ ಮೂಲಕ ಅಪ್‌ಡೇಟ್ ಮಾಡುವ ವ್ಯವಸ್ಥೆಯನ್ನು ಉಲ್ಲೇಖ ಪತ್ರ 01 ರಂತೆ ದಿನಾಂಕ 01.01.2020 ರಿಂದ 10.01.02020ರ ವರಗೆ ಮಾಡಲಾಗಿತ್ತು. ಆದಾಗ್ಯೂ ದಿನಾಂಕವನ್ನು ವಿಸ್ತರಿಸುವಂತೆ ಕೆಲವು ಶಾಲಾ ಮುಖ್ಯಸ್ಥರು ದೂರವಾಣಿ ಮತ್ತು ಖುದ್ದಾಗಿ ಕೋರಿರುವುದರಿಂದ ಸದರಿ ದಿನಾಂಕವನ್ನು ದಿನಾಂಕ 20.01.2020ರವರೆಗೆ ವಿಸ್ತರಿಸಲಾಗಿದೆ ಮತ್ತು ಇದು ಅಂತಿಮ ವಿಸ್ತರಣೆಯಾಗಿರುತ್ತದೆ.

ಶಾಲಾ ಮುಖ್ಯ ಶಿಕ್ಷಕರು ಮಂಡಳಿಯ ಜಾಲತಾಣದಲ್ಲಿ ಈಗಾಗಲೇ ಲಭ್ಯವಿರುವ ತಂತ್ರಾಂಶವನ್ನು ಬಳಸಿ ತಮ್ಮ ಶಾಲೆಯ ತಾತ್ಕಾಲಿಕ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು, ಪರಿಶೀಲಿಸಿ ಹಾಗೂ ಅಗತ್ಯವಿದ್ದಲ್ಲಿ ವಿದ್ಯಾರ್ಥಿಗಳ ವೈಯಕ್ತಿಕ ವಿವರಗಳ ತಿದ್ದುಪಡಿಗಳನ್ನು ಅಪ್‌ಡೇಟ್ ಮಾಡಲು ಸೂಚಿಸಿದೆ. **ಮೌಲ್ಯಮಾಪಕರ ನೋಂದಣಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ಫ್ರೀಜ್ ಮಾಡಿದ ನಂತರ ಮಾತ್ರ ತಾತ್ಕಾಲಿಕ ಪ್ರವೇಶ ಪತ್ರಗಳ ಡೌನ್ ಲೋಡ್ ಮಾಡಿಕೊಳ್ಳಬಹುದಾಗಿರುತ್ತದೆ.**

1) ಮಂಡಳಿಯ ಜಾಲತಾಣ http://www.kseeb.kar.nic.in ದ ಶಾಲಾ ಲಾಗಿನ್ ನಲ್ಲಿ ತಂತ್ರಾಂಶ ಲಭ್ಯವಿದೆ.
2) ಲಾಗಿನ್ ಆದ ನಂತರ ಮೊದಲು ಆಯಾ ಶಾಲೆಯ ಮುಖ್ಯಸ್ಥರು ತಮ್ಮ ಶಾಲೆಯ ಎಲ್ಲಾ ವಿದ್ಯಾರ್ಥಿಗಳ ತಾತ್ಕಾಲಿಕ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಪರಿಶೀಲಿಸಬೇಕು.
3) ತಾತ್ಕಾಲಿಕ ಪ್ರವೇಶಪತ್ರದಲ್ಲಿ 8 ಅಂಶಗಳಲ್ಲಿ ತಿದ್ದುಪಡಿಗಳನ್ನು ಮಾಡಲು ಅವಕಾಶ ಕಲ್ಪಿಸಲಾಗಿದೆ. ಅಭ್ಯರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮ ದಿನಾಂಕ, ಲಿಂಗ, ಧರ್ಮ, ಫೋಟೋ ಮತ್ತು ಸಹಿಗಳಲ್ಲಿ ಯಾವುದಾದರು ತಪ್ಪು ಇದ್ದಲ್ಲಿ, ತಿದ್ದುಪಡಿ ಮಾಡಿ ಪರಿಷ್ಕೃತ ತಾತ್ಕಾಲಿಕ ಪ್ರವೇಶ ಪತ್ರಗಳನ್ನು ಡೌನ್ ಲೋಡ್ ಮಾಡಿಕೊಳ್ಳಬಹುದಾಗಿರುತ್ತದೆ.
4) ಶಾಲಾ ಅಭ್ಯರ್ಥಿಗಳು ಎಸ್.ಎ.ಟಿ.ಎಸ್ ನಂಬರ್ (**SATS NUMBER**), ಖಾಸಗಿ ಅಭ್ಯರ್ಥಿಗಳು ರೆಫರೆನ್ಸ್ ನಂಬರ್ (**REFERENCE NUMBER**) ಹಾಗೂ ಪುನರಾವರ್ತಿತ ಅಭ್ಯರ್ಥಿಗಳು ನೋಂದಣಿ ಸಂಖ್ಯೆ (**REGISTRATION NUMBER**) ನಮೂದಿಸಿ ಅಗತ್ಯವಿದ್ದಲ್ಲಿ ತಿದ್ದುಪಡಿಗಳನ್ನು ಮಾಡಬಹುದಾಗಿರುತ್ತದೆ.
5) ಶಾಲಾ ಅಭ್ಯರ್ಥಿಗಳ ವಿವರಗಳನ್ನು ತಿದ್ದುಪಡಿ ಮಾಡಬೇಕಾದಲ್ಲಿ, ಮೊದಲು ಎಸ್.ಎ.ಟಿ.ಎಸ್ ಡೇಟಾಬೇಸ್ ನಲ್ಲಿ ತಿದ್ದುಪಡಿ ಮಾಡಿ ನಂತರ ಮಂಡಳಿಯ ಶಾಲಾ ಲಾಗಿನ್‌ನಲ್ಲಿ Update Latest SATS Data ಕ್ಲಿಕ್ ಮಾಡಿ ಸೇವ್ ಮಾಡಬೇಕು.

6) ಪುನರಾವರ್ತಿತ ಅಭ್ಯರ್ಥಿಗಳಿಗೆ ಫೋಟೋ ಮತ್ತು ಸಹಿಯನ್ನು ಮಾತ್ರ ತಿದ್ದುಪಡಿ ಮಾಡಲು ಅವಕಾಶ ಮಾಡಿಕೊಡಲಾಗಿದೆ.

ಮೇಲ್ಕಂಡ ಈ ಅಂಶಗಳನ್ನು ಹೊರತುಪಡಿಸಿ ಮಾಧ್ಯಮ, ವಿದ್ಯಾರ್ಥಿಯ ಬಗೆ (Type of the Student) ಹಾಗೂ ವಿಷಯಗಳಲ್ಲಿ ಯಾವುದಾದರೂ ಬದಲಾವಣೆಗಳಿದ್ದಲ್ಲಿ ಮಂಡಳಿಯಲ್ಲಿನ ಆಯಾ ಜಿಲ್ಲಾ ನೋಡಲ್ ಅಧಿಕಾರಿಗಳಿಗೆ ಲಿಖಿತವಾಗಿ ಮನವಿಯನ್ನು ದಿನಾಂಕ 25.01.2020ರೊಳಗಾಗಿ ಸಲ್ಲಿಸುವುದು.

(ಸುಮಂಗಲ. ವಿ)
ನಿರ್ದೇಶಕರು, ಪರೀಕ್ಷೆಗಳು 10/1/2020

ಅಗತ್ಯ ಕ್ರಮಕ್ಕಾಗಿ :

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ
2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ
3) ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗು ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ